# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಸದಸ್ಯರ ಹೆಸರು | ಡಾ. ಎಂ.ಜಿ.ಮುಳೆ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 773(930) |
| ಉತ್ತರಿಸಬೇಕಾದ ದಿನಾಂಕ | 19.08.2025 |
| ಉತ್ತರಿಸಬೇಕಾದವರು | ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸುಮಾರು 75 ರಿಂದ 80 ಸಾವಿರ ಜನಸಂಖ್ಯೆ ಹಾಗೂ 15 ಸಾವಿರಕ್ಕಿಂತ ಹೆಚ್ಚು ವಸತಿ, ವಾಣಿಜ್ಯ, ಕೈಗಾರಿಕೆ ಕಟ್ಟಡಗಳಿರುವ ಬಸವ ಕಲ್ಯಾಣದಲ್ಲಿ ಒಳ ಚರಂಡಿ ವ್ಯವಸ್ಥೆಯಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಬಸವಕಲ್ಯಾಣದಲ್ಲಿ ಎಸ್.ಟಿ.ಪಿ ಮತ್ತು ಎಫ್.ಎಸ್.ಟಿ.ಪಿ ಘಟಕಗಳು ನಿರ್ಮಾಣವಾಗುತ್ತಿದ್ದರೂ ಸೂಕ್ತ ಒಳಚರಂಡಿ ವ್ಯವಸ್ಥೆ ಇಲ್ಲದೆ ಸೊಳ್ಳೆಗಳು ಉತ್ಪತ್ತಿಯಾಗಿ ಇಲ್ಲಿನ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿರುವುದರಿಂದ ಅಧ್ಯತೆಯ ಮೇರೆಗೆ ಒಳಚರಂಡಿ ವ್ಯವಸ್ಥೆ ಕಲ್ಪಿಸುವ ಬಗ್ಗೆ ಸರ್ಕಾರ ಕೈಗೊಳ್ಳಬಹುದಾದ ಕ್ರಮವೇನು; | ಬಸವಕಲ್ಯಾಣ ಪಟ್ಟಣಕ್ಕೆ ಸ್ವಚ್ಛ ಭಾರತ್ ಮಿಷನ್(ನ)-2.0 ಜಲಶುದ್ಧಿ ಅಭಿಯಾನ ಅಡಿಯಲ್ಲಿ 10.64 ಎಂಎಲ್‌ಡಿ ಸಾಮರ್ಥ್ಯದ ರೊಚ್ಚು ನೀರು ಸಂಸ್ಕರಣಾ ಘಟಕ (ಎಸ್‌ಟಿಪಿ) ವನ್ನು ರೂ.19.15 ಕೋಟಿಗಳಿಗೆ ನಿರ್ಮಿಸಲು ವಿಸ್ತೃತ ಯೋಜನಾ ವರದಿ(DPR) ತಯಾರಿಸಿ, ಅದರಂತೆ ಟೆಂಡರ್ ಆಹ್ವಾನಿಸಲಾಗಿರುತ್ತದೆ ಹಾಗೂ ಟೆಂಡರ್ ಸಲ್ಲಿಸಲು ದಿ: 22.08.2025 ಕೊನೆಯ ದಿನಾಂಕವಾಗಿರುತ್ತದೆ.<br><br>ಬಸವಕಲ್ಯಾಣ ನಗರದಲ್ಲಿ 18 KLD ಸಾಮರ್ಥ್ಯದ FSTP ಘಟಕವನ್ನು ರೂ.3.32 ಕೋಟಿಗಳ ವೆಚ್ಚದಲ್ಲಿ ನಿರ್ಮಾಣ ಮಾಡಲು ದಿನಾಂಕ: 04.07.2024 ರಂದು ಕಾರ್ಯಾದೇಶ ನೀಡಲಾಗಿದ್ದು, ಪ್ರಸ್ತುತ ಕಾಮಗಾರಿ ಪ್ರಗತಿಯು ಶೇ. 55 ರಷ್ಟು ಪೂರ್ಣಗೊಂಡಿದ್ದು, ಸೆಪ್ಟೆಂಬರ್ 2025ರ ಅಂತ್ಯಕ್ಕೆ FSTP ಘಟಕದ ನಿರ್ಮಾಣವನ್ನು ಪೂರ್ಣಗೊಳಿಸಲಾಗುವುದು.<br><br>ಬಸವಕಲ್ಯಾಣ ನಗರದಲ್ಲಿ ಸೊಳ್ಳೆಗಳು ಉತ್ಪತ್ತಿಯಾಗದಂತೆ ಮತ್ತು ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರದಂತೆ ನಗರಸಭೆಯಿಂದ ಪ್ರತಿದಿನ ಮನೆ ಮನೆ ಕಸ |

| | | |
|---|---|---|
| | | ಸಂಗ್ರಹಣೆ, ಚರಂಡಿಗಳ ಸ್ವಚ್ಛತೆ, ರಾಸಾಯನಿಕ ಪೌಡರ್ ಸಿಂಪಡಣೆ ಮತ್ತು ರಾಸಾಯನಿಕ ಔಷಧಿ ಸಿಂಪಡಣೆ ಮಾಡುವುದರ ಮೂಲಕ ಕ್ರಮವಹಿಸಲಾಗುತ್ತಿದೆ. |
| ಇ) | ಯಾವ ಕಾಲಮಿತಿಯಲ್ಲಿ ಒಳಚರಂಡಿ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು? | ಸದರಿ ನಗರದಲ್ಲಿ ಒಳಚರಂಡಿ ಯೋಜನೆಯನ್ನು ರೂಪಿಸಲು ಮಂಡಳಿಯಿಂದ ಪ್ರಸ್ತಾವನೆ ಬಂದಲ್ಲಿ ಪರಿಶೀಲಿಸಲಾಗುವುದು. |

ಸಂಖ್ಯೆ : ನಅಇ 86 ಯುಎಂಎಸ್ 2025

**(ಬಿ.ಎಸ್. ಸುರೇಶ)**
ನಗರಾಭಿವೃದ್ಧಿ ಮತ್ತು
ನಗರ ಯೋಜನೆ ಸಚಿವರು